

# ಕೆಎಲ್‌ಎಸ್ ವಿಡಿಐಟಿಯಲ್ಲಿ ಮಾಜಿ ವಿದ್ಯಾರ್ಥಿಗಳ ಸಮ್ಮೇಳನ

**ಶಿರಸಿ ಸಮಾಚಾರ ⏭ ಹಳಿಯಾಳ:** ಮನುಷ್ಯ ಆಧ್ಯಾತ್ಮಿಕತೆಯೆಡೆಗೆ ಒಲವು ತೋರಿದಾಗಲೇ ಸಾಫಲ್ಯತೆ ಹೊಂದವನು ಎಂದು ಸ್ವಾಮಿ ವಿಜಯಾನಂದ ಸರಸ್ವತಿ ಹೇಳಿದರು.

ಪಟ್ಟಣದ ಕೆಎಲ್‌ಎಸ್ ವಿಡಿಐಟಿ ಮಹಾವಿದ್ಯಾಲಯದಲ್ಲಿ ಮಾಜಿ ವಿದ್ಯಾರ್ಥಿಗಳ ಸಮ್ಮೇಳನವನ್ನು ಆಯೋಜಿಸಲಾಗಿತ್ತು. ಕಾರ್ಯಕ್ರಮಕ್ಕೆ ಅತಿಥಿಗಳಾಗಿ ಧಾರವಾಡದ ರಾಮಕೃಷ್ಣ ಆಶ್ರಮದ ವಿಜಯಾನಂದ ಸರಸ್ವತಿ ಸ್ವಾಮಿಗಳು ಆಗಮಿಸಿದ್ದರು.

ಶಿಕ್ಷಣದ ಜೊತೆಗೆ ಮಾನವೀಯ ಮೌಲ್ಯಗಳನ್ನು ಅಳವಡಿಸಿಕೊಳ್ಳುವುದರ ಮೂಲಕ ಉತ್ತಮ ನಾಗರಿಕರಾಗುವಂತೆ ಹೇಳಿದರು. ಜೀವನದಲ್ಲಿ ಒತ್ತಡ ನಿರ್ವಹಣೆಗೆ ಆಧ್ಯಾತ್ಮವು ಅತ್ಯಂತ ಸಹಕಾರಿಯಾಗಲಿದೆ ಎಂದು ಹೇಳಿದರು. ಉತ್ತಮ ಹವ್ಯಾಸಗಳನ್ನು ರೂಢಿಸಿಕೊಂಡು ಸಂತೋಷಮಯ ಜೀವನ ಹೊಂದುವಂತೆ ಕರೆ ನೀಡಿದರು.

ಅಧ್ಯಕ್ಷತೆವಹಿಸಿ ಮಾತನಾಡಿದ ಪ್ರಾಚಾರ್ಯ ಡಾ.ವಿ.ಎ.ಕುಲಕರ್ಣಿ ಅವರು, ಮಹಾವಿದ್ಯಾಲಯದ ವಿದ್ಯಾರ್ಥಿಗಳು ಪ್ರತಿಷ್ಠಿತ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವುದು ಹೆಮ್ಮೆಯ ಸಂಗತಿ ಎಂದು ಹೇಳಿದರು.

ಪ್ರೊ.ಪ್ಲಾಸಿನ್ ಡೈಯಾಸ್ ಕಾರ್ಯಕ್ರಮ ಸಂಯೋಜಿಸಿದ್ದರು. ನಲವತ್ತಕ್ಕೂ ಅಧಿಕ ಮಾಜಿ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ವಿವಿಧ ವಿಭಾಗದ ಡೀನ್‌ಗಳು, ವಿವಿಧ ವಿಭಾಗದ ಮುಖ್ಯಸ್ಥರುಗಳು ಉಪಸ್ಥಿತರಿದ್ದರು.



# ಮಾಜಿ ವಿದ್ಯಾರ್ಥಿಗಳ ಸಮ್ಮೇಳನ

**ಸಾಗರ ಸಾಮ್ರಾಟ ಸಮಾಚಾರ**

**ಹಳಿಯಾಳ** ಮನುಷ್ಯ ಆಧ್ಯಾತ್ಮಿಕತೆ-ಯಡೆಗೆ ಒಲವು ತೋರಿದಾಗಲೇ ಸಾಫಲ್ಯತೆ ಹೊಂದವನು ಎಂದು ಸ್ವಾಮಿ ವಿಜಯಾನಂದ ಸರಸ್ವತಿ ಹೇಳಿದರು.

ಪಟ್ಟಣದ ಕೆ ಎಲ್ ಎಸ್ ವಿ ಡಿ ಐ ಟಿ ಮಹಾವಿದ್ಯಾಲಯದಲ್ಲಿ ಮಾಜಿ ವಿದ್ಯಾರ್ಥಿಗಳ ಸಮ್ಮೇಳನವನ್ನು ಡಿಸೆಂಬರ್ 17ರಂದು ಆಯೋಜಿಸಲಾಗಿತ್ತು. ಕಾರ್ಯಕ್ರಮಕ್ಕೆ ಅತಿಥಿಗಳಾಗಿ ಧಾರವಾಡದ ರಾಮ ಕೃಷ್ಣ ಆಶ್ರಮದ ಅಧ್ಯಕ್ಷಶ್ರೀ ವಿಜಯಾನಂದ ಸರಸ್ವತಿ ಸ್ವಾಮಿಗಳು ಆಗಮಿಸಿದ್ದರು. ಶಿಕ್ಷಣದ ಜೊತೆಗೆ ಮಾನವೀಯ ಮೌಲ್ಯಗಳನ್ನು ಅಳವಡಿಸಿಕೊಳ್ಳುವುದರ ಮೂಲಕ ಉತ್ತಮ ನಾಗರಿಕರಾಗುವಂತೆ ಹೇಳಿದರು.

ಜೀವನದಲ್ಲಿ ಒತ್ತಡ ನಿರ್ವಹಣೆಗೆ ಆಧ್ಯಾತ್ಮವು ಅತ್ಯಂತ ಸಹಕಾರಿಯಾಗುವುದೆಂದು ಹೇಳಿದರು. ಉತ್ತಮ ಹವ್ಯಾಸಗಳನ್ನು ರೂಢಿಸಿಕೊಂಡು ಸಂತೋಷಮಯ ಜೀವನ ಹೊಂದುವಂತೆ ಕರೆ ನೀಡಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಚಾರ್ಯ ಡಾ. ವಿ ಎ ಕುಲಕರ್ಣಿ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಪ್ರತಿಷ್ಠಿತ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವುದು ಹೆಮ್ಮೆಯ ಸಂಗತಿ ಎಂದು ಹೇಳಿದರು.

ಪ್ರೊ. ಪ್ಲಾಸಿನ್ ಡೈಯಾಸ್ ಕಾರ್ಯಕ್ರಮ ಸಂಯೋಜಿಸಿದ್ದರು. ನಲವತ್ತಕ್ಕೂ ಅಧಿಕ ಮಾಜಿ ವಿದ್ಯಾರ್ಥಿಗಳು ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ವಿವಿಧ ವಿಭಾಗದ ಡೀನ್ ಗಳು, ವಿವಿಧ ವಿಭಾಗದ ಮುಖ್ಯಸ್ಥರುಗಳು ಈ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.